ಶಾಲಾ ಸಂಕೀರ್ಣ ನಿರ್ಮಿಸಲು ಟೆಂಡರ್ ಕರೆಯಲಾಗಿದ್ದು, ಒಬ್ಬ ಟೆಂಡರದಾರರು ಟೆಂಡರ್‌ನಲ್ಲಿ ಭಾಗವಹಿಸಿದ್ದು, ತಾಂತ್ರಿಕ ಅಗತ್ಯತೆಗಳ ಕೊರತೆಯಿಂದ ತಿರಸ್ಕೃತವಾಗಿರುತ್ತದೆ. ದಿನಾಂಕ:1–07–2009ರಂದು ಮರು ಟೆಂಡರ್ ಕರೆಯಲಾಗಿದೆ. ತದನಂತರ, ಅರ್ಹ ಗುತ್ತಿಗೆದಾರರಿಗೆ ಕಾಮಗಾರಿ ಆದೇಶವನ್ನು ನೀಡಲಾಗುವುದು.

113 ಶ್ರೀ ಬಿದರೂರು. ಎಸ್ ವಿರೂಪಾಕ್ಷಪ್ಪ(ಗದಗ)
ರಾಮಚಂದ್ರಗೌಡ(ವೈದ್ಯಕೀಯ ಶಿಕ್ಷಣ ಸಚಿವರು)

1 ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಮೆಡಿಕಲ್ ಕಾಲೇಜು ಪ್ರಾರಂಭಿಸುವ ಯೋಜನೆಯು ಸರ್ಕಾರದ ಮುಂದಿದೆಯೇ;

ಇಲ್ಲ

2 ಹಾಗಿದ್ದಲ್ಲಿ, ಗದಗ ಜಿಲ್ಲೆ ಈ ಸೌಲಭ್ಯದಿಂದ ವಂಚಿತವಾಗಿರುವುದು ನಿಜವೇ;

ಉದ್ಭವಿಸುವುದಿಲ್ಲ

3 ಹಾಗಿದ್ದಲ್ಲಿ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಿ ಈ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಿ ಕೊಡುವುದು ಯಾವಾಗ;

ಉದ್ಭವಿಸುವುದಿಲ್ಲ

114 ಶ್ರೀ ಬಿದರೂರು ಎಸ್ ವಿರೂಪಾಕ್ಷ (ಗದಗ), ಎಂ.ಎಲ್.ಎ
ಪ್ರೊಡಾ. ಮುಮ್ತಾಜ್ ಅಲಿ ಖಾನ್(ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)

ಅ) 2008–09ನೇ ಸಾಲಿನಲ್ಲಿ ವಕ್ಫ್ ಅನುದಾನವನ್ನು ಗದಗ ಜಿಲ್ಲೆಯಲ್ಲಿ ಬಿಡುಗಡೆ ಮಾಡಿರುವ ವಿವರವನ್ನು ಒದಗಿಸುವುದು;

2008–09ನೇ ಸಾಲಿನಲ್ಲಿ ಸಾಕಷ್ಟು ಅನುದಾನ ಲಭ್ಯವಿಲ್ಲದ ಕಾರಣ ಗದಗ ಜಿಲ್ಲೆಯಲ್ಲಿ ವಕ್ಫ್ ಸಂಸ್ಥೆಗಳಿಗೆ ಯಾವುದೇ ಅನುದಾನ ಬಿಡುಗಡೆ ಮಾಡಿರುವುದಿಲ್ಲ. ಹಾಗೂ 2008–09ನೇ ಸಾಲಿನಲ್ಲಿ ರಾಜ್ಯದ 7 ಜಿಲ್ಲೆಗಳಿಗೆ ಅನುದಾನ ಬಿಡುಗಡೆ ಮಾಡಬೇಕಾಗಿದ್ದು, ಇದರಲ್ಲಿ ಗದಗ ಜಿಲ್ಲೆಯೂ ಇರುತ್ತದೆ. ಪ್ರಸಕ್ತ ಸಾಲಿನಲ್ಲಿ ಈ ಜಿಲ್ಲೆಗಳನ್ನು ಆದ್ಯತೆ ಮೇರೆಗೆ ಪರಿಗಣಿಸಿ ವಕ್ಫ್ ಸಂಸ್ಥೆಗಳಿಗೆ ಅನುದಾನ ಬಿಡುಗಡೆಗೊಳಿಸಲಾಗುವುದು.

ಆ) ಶಾದಿಮಹಲ್ ನಿರ್ಮಾಣಕ್ಕಾಗಿ ಕೊಡಲ್ಪಟ್ಟಿರುವ ಅನುದಾನದ ಮೊತ್ತದ ಪಟ್ಟಿಯನ್ನು ಬಿಡುಗಡೆ ಮಾಡಲಾಗಿದೆಯೇ? ಹಾಗಿದ್ದಲ್ಲಿ ವಿವರ ಒದಗಿಸುವುದು.

2008–09ನೇ ಸಾಲಿನಲ್ಲಿ ಶಾದಿಮಹಲ್/ಸಮುದಾಯ ಭವನ ನಿರ್ಮಾಣಕ್ಕಾಗಿ ರೂ.1099.50 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ವಿವರ ಅನುಬಂಧ–1ರಲ್ಲಿ ಲಗತ್ತಿಸಿದೆ.